# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 918(1112) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 12.03.2026 |
| ಉತ್ತರಿಸಬೇಕಾದ ಸಚಿವರು | : | ಸನ್ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಯಾವುದೇ ಸಮುದಾಯವನ್ನು ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರ್ಪಡೆ ಮಾಡುವ ಎಷ್ಟು ಪ್ರಸ್ತಾವನೆಗಳು ಸರ್ಕಾರದ ಮುಂದಿವೆ; ಈ ಕುರಿತು ಇ-ಕಡತಗಳೂ ಸೇರಿದಂತೆ ಎಷ್ಟು ಕಡತಗಳು ಚಾಲ್ತಿಯಲ್ಲಿವೆ; ಅವುಗಳಲ್ಲಿ ಎಷ್ಟು ಕಡತಗಳನ್ನು ಯಾವ ಆಧಾರದಲ್ಲಿ ಮುಕ್ತಾಯಗೊಳಸಿಳಾಗಿದೆ ಅಥವಾ ವಿಲೀನಗೊಳಿಸಲಾಗಿದೆ; | ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರ್ಪಡೆ ಮಾಡುವ ಕುರಿತು 11 ಪ್ರಸ್ತಾವನೆಗಳು ಸರ್ಕಾರದ ಮುಂದಿದ್ದು ಎಲ್ಲಾ ಕಡತಗಳು ಚಾಲ್ತಿಯಲ್ಲಿವೆ.<br><br>ಇದುವರೆಗೆ ಯಾವುದೇ ಕಡತವನ್ನು ಮುಕ್ತಾಯಗೊಳಿಸಲಾಗಿರುವುದಿಲ್ಲ. |
| ಆ) | ದಕ್ಷಿಣ ಕನ್ನಡ / ಉಡುಪಿ ಜಿಲ್ಲೆಗಳಲ್ಲಿ ಇರುವ ಕುಡುಬಿ ಸಮುದಾಯವನ್ನು ಪರಿಶಿಷ್ಟ ಪಂಗಡಗಳ (Scheduled Tribes) ಪಟ್ಟಿಗೆ ಸೇರಿಸುವ ಕುರಿತು ಈವರೆಗಿನ ಪ್ರಗತಿಯೇನು; ಈ ಕುರಿತು ಹಿಂದುಳಿದ ವರ್ಗಗಳ ಇಲಾಖೆಯಿಂದ ನಿರಾಕ್ಷೇಪಣ ಪತ್ರ ಪಡೆದುಕೊಂಡ 6 ತಿಂಗಳಾದರೂ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸದಿರಲು ಕಾರಣವೇನು; ಯಾವಾಗ ಈ ಕುರಿತು ಪ್ರಸ್ತಾವನೆ ಸಲ್ಲಿಸಲಾಗುವುದು; | ಸರ್ಕಾರದ ಆದೇಶ ಸಂಖ್ಯೆ: ಸಕಇ 113 ಎಸ್‌ಎಡಿ 2007, ದಿನಾಂಕ: 03.03.2009ರನ್ವಯ ಕುಡುಬಿ ಸಮುದಾಯದ ಕುಲಶಾಸ್ತ್ರೀಯ ಅಧ್ಯಯನವನ್ನು ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಇವರು ನಡೆಸಿ ಅಂತಿಮ ವರದಿಯನ್ನು ದಿನಾಂಕ; 08.10.2010ಕ್ಕೆ ಸಲ್ಲಿಸಿರುತ್ತಾರೆ. ಈ ವರದಿಯಲ್ಲಿ ಕುಡುಬಿ ಜಾತಿಯನ್ನು ಪರಿಶಿಷ್ಟ ಜಾತಿಯ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಲಾಗಿರುತ್ತದೆ.<br><br>ರಾಜ್ಯದಲ್ಲಿ ಕುಡುಬಿ ಜನಾಂಗವನ್ನು ಪರಿಶಿಷ್ಟ ಪಂಗಡ ಪಟ್ಟಿಗೆ ಸೇರಿಸುವಂತೆ ಹಲವಾರು ಮನವಿಗಳು ಸ್ವೀಕೃತವಾಗುತ್ತಿರುವುದರಿಂದ ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ವರದಿಯನ್ನು ಪುನರ್ ಪರಿಶೀಲಿಸಲು ಧಾರವಾಡ ವಿಶ್ವವಿದ್ಯಾಲಯ ಹೊರತುಪಡಿಸಿ ಯಾವುದಾದರೂ ನಾಲ್ಕು ವಿಶ್ವವಿದ್ಯಾಲಯಗಳಿಂದ ದರಪಟ್ಟಿ ಪಡೆದು ಸರ್ಕಾರಕ್ಕೆ ಸಲ್ಲಿಸುವಂತೆ ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆಯನ್ನು ಕೋರಲಾಗಿತ್ತು.<br><br>ಅದರಂತೆ, ಇನ್ಸ್ಟಿಟ್ಯೂಟ್ ಫಾರ್ ಸೋಷಿಯಲ್ ಅಂಡ್ ಎಕನಾಮಿಕ್ ಚೇಂಜ್, ಬೆಂಗಳೂರು ಇವರು ಮಾತ್ರ ಪ್ರಸ್ತಾವನೆಯನ್ನು ಸಲ್ಲಿಸಿದ್ದರಿಂದ ಸರ್ಕಾರದ ಆದೇಶ ಸಂಖ್ಯೆ: ಸಕಇ 113 ಎಸ್‌ಎಡಿ 2007, ದಿನಾಂಕ: 23.04.2015 ರನ್ವಯ ಕುಡುಬಿ ಸಮುದಾಯದ ಕುಲಶಾಸ್ತ್ರೀಯ ಅಧ್ಯಯನವನ್ನು ಕೈಗೊಳ್ಳಲು ನಿರ್ದೇಶಕರು, ಇನ್ಸ್ಟಿಟ್ಯೂಟ್ ಆಫ್ ಸೋಷಿಯಲ್ ಅಂಡ್ ಎಕನಾಮಿಕಲ್ ಚೇಂಜ್, ನಾಗರಭಾವಿ, ಬೆಂಗಳೂರು ಇವರಿಗೆ ವಹಿಸಲಾಗಿರುತ್ತದೆ.<br><br>ಅದ ರಂತೆ ಕೈಗೊಂಡ ಅಧ್ಯಯನದ ಅಂತಿಮ ವರದಿಯನ್ನು ದಿನಾಂಕ:25.01.2021 ರಂದು ಸಲ್ಲಿಸಿದ್ದು, |

| | | |
|---|---|---|
| | | ಸದರಿ ಅಧ್ಯಯನದಲ್ಲಿ ಕುಡುಬಿ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಶಿಫಾರಸ್ಸು ಮಾಡಲಾಗಿರುತ್ತದೆ.<br><br>ಪ್ರಸ್ತುತ ಕುಡುಬಿ ಜನಾಂಗವು ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರ್ಪಡೆಗೊಂಡಿರುವುದರಿಂದ ಸದರಿ ಸಮುದಾಯವನ್ನು ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರ್ಪಡೆಗೊಳಿಸುವ ಕುರಿತು ಹಿಂದುಳಿದ ವರ್ಗಗಳ ಆಯೋಗದ ಅಭಿಪ್ರಾಯವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮುಖಾಂತರ ಪಡೆಯಲಾಗಿರುತ್ತದೆ.<br><br>ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1ರ ಜಾತಿ ಪಟ್ಟಿಯ ಕ್ರ.ಸಂ 30 ರಲ್ಲಿ ಕುಡುಬಿ ಜಾತಿಯು ನಮೂದಾಗಿರುತ್ತದೆ. ಪರಿಶಿಷ್ಟ ಪಂಗಡದ ಪಟ್ಟಿಗೆ ಕುಡುಬಿ ಜಾತಿಯನ್ನು ಸೇರ್ಪಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಯಾವುದೇ ಆಕ್ಷೇಪಣೆ ಇರುವುದಿಲ್ಲ. ಆದ್ದರಿಂದ ಕುಡುಬಿ ಜಾತಿಯನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರ್ಪಡೆ ಮಾಡಿದಲ್ಲಿ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1 ರ ಜಾತಿ ಪಟ್ಟಿಯಿಂದ ಕುಡುಬಿ ಜಾತಿಯನ್ನು ಕೈಬಿಡುವ ಕುರಿತು ಅಗತ್ಯ ಕ್ರಮ ವಹಿಸಲಾಗುವುದೆಂದು ತಿಳಿಸಿರುತ್ತಾರೆ.<br><br>ಪ್ರಸ್ತಾವನೆಯ ಕುರಿತು ಸಚಿವ ಸಂಪುಟದ ಅನುಮೋದನೆ ಪಡೆದು ಕೇಂದ್ರ ಸರ್ಕಾರಕ್ಕೆ ಸಲ್ಲಿಸುವ ಕುರಿತು ಸರ್ಕಾರದ ಪರಿಶೀಲನೆಯಲ್ಲಿದೆ. |
| ಇ) | ಯಾವುದೇ ಸಮುದಾಯವನ್ನು ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರ್ಪಡೆ ಮಾಡುವ ಬಗೆಗಿನ ಎಷ್ಟು ಕಡತಗಳು ಎಷ್ಟು ಅವಧಿಯಿಂದ ಚಾಲನೆಯಾಗುತ್ತಿದೆ ಮತ್ತು ಅದಕ್ಕೆ ಕಾರಣಗಳೇನು; | ಯಾವುದೇ ಸಮುದಾಯವನ್ನು ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರ್ಪಡೆಗೊಳಿಸುವಂತೆ ಕೋರಿ ಸ್ವೀಕೃತವಾಗುವ ಮನವಿ / ಪ್ರಸ್ತಾವನೆಗಳನ್ನು ಪರಿಶೀಲಿಸಿ ವರದಿ ಸಲ್ಲಿಸಲು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇವರಿಗೆ ವಹಿಸಲಾಗುತ್ತದೆ. ಇವರಿಂದ ಸ್ವೀಕೃತವಾಗುವ ಕುಲಶಾಸ್ತ್ರೀಯ ಅಧ್ಯಯನದ ವರದಿಯನ್ನು ಆಧರಿಸಿ, ಸಚಿವ ಸಂಪುಟ ಅನುಮೋದನೆಯೊಂದಿಗೆ ಪ್ರಸ್ತಾವನೆಯನ್ನು ಕೇಂದ್ರಕ್ಕೆ ಶಿಫಾರಸ್ಸು ಮಾಡಲು ಕ್ರಮವಹಿಸಲಾಗುತ್ತದೆ. |
| ಈ) | ಸರ್ಕಾರದ ಎಲ್ಲಾ ಇಲಾಖೆಗಳು, ನಗರ / ಗ್ರಾಮೀಣ ಸ್ಥಳೀಯ ಸಂಸ್ಥೆಗಳು, ವಿವಿಧ ಅಭಿವೃದ್ಧಿ ನಿಗಮಗಳು, ಪರಿಶಿಷ್ಟ ಪಂಗಡಗಳ ಸಮುದಾಯದವರಿಗಾಗಿ ಅಭಿವೃದ್ಧಿ ಕಾರ್ಯಕ್ರಮ ರೂಪಿಸುವಾಗ ಅನುಸರಿಸಬೇಕಾದ ಮಾರ್ಗಸೂಚಿಗಳು ಯಾವುವು; ಅವುಗಳನ್ನು ಯಾವಾಗ ರೂಪಿಸಲಾಗಿತ್ತು; ಅವುಗಳನ್ನು ಪರಿಷ್ಕರಿಸುವ ಆಲೋಚನೆಯಿದೆಯೇ; | ಕರ್ನಾಟಕ ಅನುಸೂಚಿತ ಜಾತಿಗಳ ಉಪ ಹಂಚಿಕೆ ಮತ್ತು ಬುಡಕಟ್ಟು ಉಪ ಹಂಚಿಕೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ 2013 ಮತ್ತು ನಿಯಮಗಳು 2017ರಂತೆ ಪರಿಶಿಷ್ಟ ಪಂಗಡದವರ ಅಭಿವೃದ್ಧಿಗಾಗಿ ವಿವಿಧ ಕಾರ್ಯಕ್ರಮಗಳನ್ನು ರೂಪಿಸಲಾಗಿರುತ್ತದೆ. |

| | | |
|---|---|---|
| ಉ) | ಪರಿಶಿಷ್ಟ ಪಂಗಡ ಸಮುದಾಯದ ಜನರಿಗೆ ವಿವಿಧ ಕಲ್ಯಾಣ ಕಾರ್ಯಕ್ರಮಗಳಿಗೆ ಭೌತಿಕ / ಆರ್ಥಿಕ ಗುರಿಯನ್ನು ಯಾವ ನಿಗದಿತ ಮಾನದಂಡವನ್ನು ಅನುಸರಿಸಿ ನಿರ್ಧರಿಸಲಾಗುತ್ತಿದೆ; ಪರಿಶಿಷ್ಟ ಪಂಗಡ ಕಾಲನಿ ವ್ಯಾಖ್ಯಾನ, ಕಾರ್ಯಕ್ರಮ ಅನುಷ್ಠಾನಕ್ಕೆ ಮಾರಕವಾಗಿದ್ದು, ಅವುಗಳನ್ನು ಯಾವಾಗ ಪರಿಷ್ಕರಿಸಲಾಗುತ್ತಿದೆ? | ಪರಿಶಿಷ್ಟ ಪಂಗಡ ಸಮುದಾಯದವರಿಗೆ ವಿವಿಧ ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ನಿಗಧಿಯಾದ ಅನುದಾನಕ್ಕೆ ಅನುಗುಣವಾಗಿ ಭೌತಿಕ / ಆರ್ಥಿಕ ಗುರಿಯನ್ನು ನಿಗಧಿಪಡಿಸಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>ಪರಿಶಿಷ್ಟ ಪಂಗಡದ ಸಮುದಾಯದವರ ಉಪ ಯೋಗಕ್ಕಾಗಿ ಸಭೆ ಸಮಾರಂಭಗಳಿಗೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಕೈಗೊಳ್ಳಲು ವಾಲ್ಮೀಕಿ ಸಮುದಾಯ ಭವನಗಳನ್ನು ನಿರ್ಮಾಣ ಮಾಡಲಾಗುತ್ತಿದೆ.<br><br>ಪ್ರಗತಿ ಕಾಲೋನಿ ಯೋಜನೆಯಡಿ ಪರಿಶಿಷ್ಟ ಪಂಗಡದ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ರಸ್ತೆ, ವಿದ್ಯುತ್, ಒಳಚರಂಡಿ, ಸಂಪರ್ಕ ರಸ್ತೆ ಇತ್ಯಾದಿ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ. |

**ಕಡತ ಸಂಖ್ಯೆ: STW/SECA/SAD/23/2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿಗಳು